# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 180(208)**

**ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)**

**ಉತ್ತರಿಸಬೇಕಾದ ದಿನಾಂಕ : 14.02.2024**

**ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು**

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ಎಷ್ಟು ಮೊತ್ತದ ಬರ ಪರಿಹಾರವನ್ನು ಬಿಡುಗಡೆ ಮಾಡಲಾಗಿದೆ? | ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯ ಬರ ನಿರ್ವಹಣೆ ಕೈಪಿಡಿ-2020ರನ್ವಯ 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಜ್ಯದ 223 ತಾಲ್ಲೂಕುಗಳನ್ನು (196 ತೀವ್ರ ಬರ & 27 ಸಾಧಾರಣ ಬರ) ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ.<br><br>ಮುಂದಿನ ದಿನಗಳಲ್ಲಿ ಕುಡಿಯುವ ನೀರು ಪೂರೈಕೆ, ಗೋಶಾಲೆ & ಮೇವಿನ ಬ್ಯಾಂಕ್ ನಿರ್ವಹಣೆ ಇತರೆ ತುರ್ತು ಬರ ನಿರ್ವಹಣೆ ಕಾರ್ಯಗಳನ್ನು ಕೈಗೆತ್ತಿಕೊಳ್ಳಲು 31 ಜಿಲ್ಲೆಗಳಿಗೆ ರೂ.324 ಕೋಟಿ ಗಳನ್ನು ದಿನಾಂಕ:31-10-2023ರಂದು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಈ ಮೊತ್ತವನ್ನು ಒಳಗೊಂಡಂತೆ ದಿನಾಂಕ:29-01-2024 ರನ್ವಯ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ಒಟ್ಟು ರೂ.735.87ಕೋಟಿ ಹಾಗೂ ತಹಶೀಲ್ದಾರ್ ಪಿಡಿ ಖಾತೆಯಲ್ಲಿ ರೂ.131.95 ಕೋಟಿ ಒಟ್ಟು ರೂ.867.82 ಕೋಟಿ ಅನುದಾನ ಲಭ್ಯವಿರುತ್ತದೆ.<br><br>ರೂ.20.00 ಕೋಟಿಗಳನ್ನು ಹಸಿರು ಮೇವು ಬೆಳೆಯುವ ಸಲುವಾಗಿ ಮೇವಿನ ಮಿನಿಕಿಟ್‌ಗಳನ್ನು ಖರೀದಿಸಿ ರೈತರಿಗೆ ಉಚಿತವಾಗಿ ವಿತರಿಸಲು ಪಶುಸಂಗೋಪನೆ ಇಲಾಖೆಗೆ ಬಿಡುಗಡೆಗೊಳಿಸಲಾಗಿದೆ.<br><br>ಕೇಂದ್ರ ಸರ್ಕಾರದಿಂದ NDRF ಅನುದಾನವನ್ನು ನಿರೀಕ್ಷಿಸಿ ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಮಾರ್ಗಸೂಚಿಗಳ ಪ್ರಕಾರ ಬೆಳೆ ಹಾನಿ ಪರಿಹಾರದ ಮೊದಲನೇ ಕಂತಾಗಿ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ನಿಯಾಮನುಸಾರ ಪ್ರತಿ ಅರ್ಹ ರೈತರಿಗೆ ರೂ.2,000/-ರವರೆಗೆ ಪಾವತಿಸಲು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರಿಗೆ ರೂ.685.00 ಕೋಟಿ ಬಿಡುಗಡೆಗೊಳಿಸಿದ್ದು, ಈ ಪೈಕಿ ದಿನಾಂಕ:12-02-2024ರವರೆಗೆ 33.09 ಲಕ್ಷ ಅರ್ಹ ರೈತರ ಆಧಾರ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ರೂ.628.03 ಕೋಟಿಗಳನ್ನು ನೇರವಾಗಿ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ . |

| | |
|---|---|
| (ಆ) ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ವ್ಯಾಪ್ತಿಗೆ ಬರುವ ತಾಲ್ಲೂಕುಗಳೆಷ್ಟು; ರೈತ ಫಲಾನುಭವಿಗಳಿಗೆ ಪರಿಹಾರವನ್ನು ನೀಡಲಾಗಿದೆಯೇ; | ಕಲ್ಯಾಣ ಕರ್ನಾಟಕ ಭಾಗದ 07 ಜಿಲ್ಲೆಗಳ ವ್ಯಾಪ್ತಿಯ 50 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ದಿನಾಂಕ:09-02-2024ರವರೆಗೆ ಸದರಿ 50 ತಾಲ್ಲೂಕುಗಳ 8,70,992 ರೈತರುಗಳಿಗೆ ಅರ್ಹತೆಯನುಸಾರ ರೂ.17175.05 ಲಕ್ಷಗಳ ಬೆಳೆ ಹಾನಿ ಪರಿಹಾರವನ್ನು ರೈತರುಗಳ ಆಧಾರ ಜೋಡಣೇ ಆಗಿರುವ ಬ್ಯಾಂಕ ಖಾತೆಗೆ ನೇರವಾಗಿ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ. |
| (ಇ) ಕಲಬರಗಿ ಜಿಲ್ಲೆ ವ್ಯಾಪ್ತಿಯ ತಾಲ್ಲೂಕುವಾರು ಫಲಾನು\|ಭವಿಗಳ ಪಟ್ಟಿಯನ್ನು ನೀಡುವುದು ಹಾಗೂ ಫಲಾನುಭವಿಗಳಿಗೆ ನೀಡಿರುವ ಮೊತ್ತದ ವಿವರದ ಜೊತೆಗೆ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು? | ಕಲಬುರಗಿ ಜಿಲ್ಲೆಯ ಎಲ್ಲಾ 11 ತಾಲ್ಲೂಕುಗಳನ್ನು ತೀವ್ರ ಬರಪೀಡಿತ ತಾಲ್ಲೂಕುಗಳೆಂದು ಘೋಷಣೆ ಮಾಡಲಾಗಿದ್ದು, ಇಲ್ಲಿಯವರೆಗೆ ಬೆಳೆ ಹಾನಿ ಪರಿಹಾರ ವಿತರಿಸಲಾದ ಗ್ರಾಮವಾರು ಫಲಾನುಭವಿ ಪಟ್ಟಿಯನ್ನು https://parihara.karnataka.gov.in/service89/PaymentDetailsReport.aspx ಜಾಲತಾಣದಲ್ಲಿ ಪಡೆಯಬಹುದಾಗಿದೆ. |

ಕಡತ ಸಂಖ್ಯೆ: ಕಂಇ 62ಟಿಎನ್ಆರ್ 2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು